ಕರ್ನಾಟಕ ಸರ್ಕಾರ
ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ:ಕಾಶಿಇ/ಶೈವಿ/36/ಪ್ರವೇಶಾತಿ ಮಾರ್ಗಸೂಚಿ/2022-23

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ
ಉನ್ನತ ಶಿಕ್ಷಣ ಸೌಧ, ಶೇಷಾದ್ರಿ ರಸ್ತೆ,
ಬೆಂಗಳೂರು,ದಿನಾಂಕ:09.09.2022

## ಸುತ್ತೋಲೆ

ವಿಷಯ: 2022-23ನೇ ಸಾಲಿನಿಂದ ಇಲಾಖಾ ವ್ಯಾಪ್ತಿಯ ಸರ್ಕಾರಿ ಮತ್ತು ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ಯುಯುಸಿಎಂಎಸ್ (UUCMS) ಮುಖಾಂತರ ಆನ್‌ಲೈನ್ ಪ್ರವೇಶ ಪ್ರಕ್ರಿಯೆಯನ್ನು ಕೈಗೊಳ್ಳುವ ಕುರಿತು.
ಉಲ್ಲೇಖ : ಸರ್ಕಾರಿ ಆದೇಶ ಸಂಖ್ಯೆ: ಇಡಿ 34 ಇಜಿಬಿವಿ 2020 (ಭಾಗ-2) ಬೆಂಗಳೂರು, ದಿನಾಂಕ:10.06.2022.

********

2022-23ನೇ ಶೈಕ್ಷಣಿಕ ಸಾಲಿಗೆ ಸಂಬಂಧಿಸಿದಂತೆ ವಿಶ್ವವಿದ್ಯಾಲಯಗಳ ಮಾರ್ಗಸೂಚಿಗಳನ್ವಯ ಯುಯುಸಿಎಂಎಸ್ UUCMS ತಂತ್ರಾಂಶದ ಮೂಲಕ ಪ್ರವೇಶಾತಿ ಕ್ರಮ ವಹಿಸುವುದು ಕಡ್ಡಾಯವಾಗಿರುತ್ತದೆ ಮುಂದುವರೆದು ಕಾಲೇಜುಗಳಲ್ಲಿ ಲಭ್ಯವಿರುವ ಕೋರ್ಸ್ / ಕಾಂಬಿನೇಷನ್‌ಗಳ ವಿವರ, ಶುಲ್ಕಗಳ ವಿವರ ಮತ್ತು ವಿದ್ಯಾರ್ಥಿಗಳಿಗೆ ದೊರೆಯುವ ಸೌಲಭ್ಯಗಳು ಹಾಗೂ ಯುಯುಸಿಎಂಎಸ್ (UUCMS) ವೆಬ್‌ಸೈಟ್‌ನ ಮಾಹಿತಿಯನ್ನು ಕಾಲೇಜಿನ ಅಂತರ್ಜಾಲ ತಾಣದಲ್ಲಿ (Website) ಹಾಗೂ ಸೂಚನಾ ಫಲಕದಲ್ಲಿ (Notice board) ಕಡ್ಡಾಯವಾಗಿ ಪ್ರಕಟಿಸುವುದು. ಪ್ರಾಂಶುಪಾಲರು ಕಾಲೇಜುಗಳ ಹಂತದಲ್ಲಿ ಪ್ರವೇಶಾತಿ ಸಮಿತಿಯನ್ನು ರಚಿಸಿಕೊಂಡು ಅಗತ್ಯವಿರುವ help desk ಸ್ಥಾಪಿಸಿ ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ಹಾಗೂ ಅಗತ್ಯ ನೆರವು ನೀಡಬೇಕಾಗಿರುತ್ತದೆ. ಅಲ್ಲದೆ ಕಾಲೇಜಿನ ಎಲ್ಲಾ ಬೋಧಕ / ಬೋಧಕೇತರ ಸಿಬ್ಬಂದಿಗಳು ಪ್ರವೇಶಾತಿ ಹೆಚ್ಚಿಸುವ ನಿಟ್ಟಿನಲ್ಲಿ ಸಕ್ರಿಯವಾಗಿ ಪಾಲ್ಗೊಂಡು ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಪ್ರವೇಶ ಪಡೆಯಲು ಕ್ರಮವಹಿಸುವುದು.

ದಿನಾಂಕ:12.09.2022ರಂದು ಪದವಿಪೂರ್ವ ಶಿಕ್ಷಣ ಮಂಡಳಿಯ ದ್ವಿತೀಯ ಪಿ.ಯು.ಸಿ ಪೂರಕ ಪರೀಕ್ಷೆಯ ಫಲಿತಾಂಶ ಪ್ರಕಟಗೊಳುತ್ತಿದ್ದು. ಪದವಿಪೂರ್ವ ಪರೀಕ್ಷೆಯಲ್ಲಿ ಉತ್ತೀರ್ಣರಾಗುವ ಹಾಗೂ ಪ್ರವೇಶ ಬಯಸಿ ಬರುವ ಎಲ್ಲಾ ವಿದ್ಯಾರ್ಥಿಗಳಿಗೂ ಪ್ರವೇಶಾತಿ ಕಲ್ಪಿಸಿಕೊಡಲು ಪ್ರಾಂಶುಪಾಲರು ಹೆಚ್ಚಿನ ಆಸಕ್ತಿವಹಿಸಿ ಪದವಿ ತರಗತಿಗಳಿಗೆ ಪ್ರವೇಶಾತಿ ಸಂಖ್ಯೆಯನ್ನು ಹೆಚ್ಚಿಸುವ ನಿಟ್ಟಿನಲ್ಲಿ ಕ್ರಮಕೈಗೊಳ್ಳಲು ಸೂಚಿಸಲಾಗಿದೆ.

09/09/22
ಜಂಟಿ ನಿರ್ದೇಶಕರು ಶೈಕ್ಷಣಿಕ

ಇವರಿಗೆ:
ರಾಜ್ಯದ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.
ಪ್ರತಿಯನ್ನು:

1. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ ಮತ್ತು ಕಲಬುರಗಿ– ಪ್ರತಿ ದಿನ ಪ್ರವೇಶಾತಿ ಪ್ರಕ್ರಿಯೆಯನ್ನು ಪರಿಶೀಲಿಸುವುದು..
2. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕೇಂದ್ರ ಕಛೇರಿ, ಬೆಂಗಳೂರು– ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
3. ಮಾನ್ಯ ಆಯುಕ್ತರ, ನಿರ್ದೇಶಕರ, ಹೆಚ್ಚುವರಿ ನಿರ್ದೇಶಕರ, ಮುಖ್ಯ ಆಡಳಿತಾಧಿಕಾರಿಗಳ ಮತ್ತು ಜಂಟಿ ನಿರ್ದೇಶಕರ ಆಪ್ತ ಶಾಖೆ– ಮಾಹಿತಿಗಾಗಿ.
4. ಕಛೇರಿ ಪ್ರತಿ.